ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ದಿನಾಂಕ **20.06.2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ- ಅರ್ಜಿದಾರರ ಪರ ವಕೀಲರಿಂದಃ-**

ಚಾಲನಾ ಪರವಾನಗಿ, ವಿಮಾ ಪಾಲಿಸಿ, ವಾಹನ ನೋಂದಣಿ ಪ್ರಮಾಣಪತ್ರ ಮತ್ತು ಪರವಾನಗಿ ಪ್ರಮಾಣಪತ್ರದ ದೃಡೀಕೃತ ನಕಲುಗಳನ್ನು ಹಾಜರುಪಡಿಸುತ್ತಿದ್ದು, ಅವುಗಳನ್ನು ನಿ.ಪಿ **12** ರಿಂದ **15** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 3 ನೇ ಎದುರುದಾರರ ಪರ ವಕೀಲರಿಂದಃ-**

ಅಪಘಾತವು ನನ್ನ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆಯೇ ಹೊರತು, **1** ನೇ ಎದುರುದಾರರ ನಿರ್ಲಕ್ಯತನದಿಂದ ಉಂಟಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಮುಂದೆ ಹೋಗುತ್ತಿದ್ದ ಲಾರಿಗೆ ಹೋಗಿ ಡಿಕ್ಕಿ ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಪರಿಹಾರವನ್ನು ಪಡೆಯುವ ಉದ್ದೇಶದಿಂದ **1** ನೇ ಎದುರುದಾರರ ವಿರುದ್ದ ಸುಳ್ಳು ಅರ್ಜಿಯನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಬಳಿ ಚಾಲನಾ ಪರವಾನಗಿ ಇದ್ದು, ಅದನ್ನು ನ್ಯಾಯಾಲಯಕ್ಕೆ ಹಾಜರುಪಡಸಿರುತ್ತೇನೆ. ನಾನು ಈ ಅರ್ಜಿಯಲ್ಲಿ ಮತ್ತು ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ನಮೂದಿಸಿರುವ ಹಣವನ್ನು ಚಿಕಿತ್ಸೆಗಾಗಿ ಖರ್ಚು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ತಿಳಿಸಿದಂತೆ ಗಾಯಗಳು ಆಗಿರುವುದಿಲ್ಲ ಹಾಗೂ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ

ಎಂದರೆ ಸರಿಯಲ್ಲ. ನನಗೆ ಅಪಘಾತದಿಂದ ಯಾವುದೇ ಅಂಗ ನ್ಯೂನ್ಯತೆ ಆಗಿರುವುದಿಲ್ಲ ಎಂದರೆ ಸರಿಯಲ್ಲ. ನನಗೆ 65 ವರ್ಷ ವಯಸ್ಸಾಗಿದೆ. ಅಪಘಾತದ ಸಂದರ್ಭದಲ್ಲಿ ನಾನು ಚಾಲಕ ವೃತ್ತಿಯನ್ನು ಮಾಡುತ್ತಿರಲಿಲ್ಲ ಹಾಗೂ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಮೊದಲಿನ ರೀತಿಯಲ್ಲಿಯೇ ಈಗಲೂ ಕೆಲಸ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪರಿಹಾರವನ್ನು ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಅಪಘಾತವು 1ನೇ ಎದುರುದಾರರ ನಿರ್ಲಕ್ಷ್ಯತನದಿಂದ ಉಂಟಾಗಿಲ್ಲದೇ ಇರುವುದರಿಂದ 3ನೇ ಎದುರುದಾರರು ಪರಿಹಾರವನ್ನು ನೀಡಲು ಭಾದ್ಯರಲ್ಲ ಎಂದರೆ ಸರಿಯಲ್ಲ. 3ನೇ ಎದುರುದಾರರ ವಿಮೆಗೆ ಒಳಪಟ್ಟ ಲಾರಿಯ ಚಾಲಕನಿಗೆ ಚಾಲನಾ ಪರವಾನಗಿ ಇರಲಿಲ್ಲ, ಆದುದ್ದರಿಂದ 3ನೇ ಎದುರುದಾರರು ಪರಿಹಾರವನ್ನು ನೀಡಲು ಭಾದ್ಯರಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.

ಎಂವಿಸಿ.148/2022
ಪಿಡಬ್ಲ್ಯೂ-1